Akashvani : Bangalore
Regional Bulletin In Kannada
20.09.2025 : 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

20.09.2025 : 14.30hrs

**ಮುಖ್ಯಾಂಶಗಳು :**

೧. ಬೆಂಗಳೂರಿನ ರಸ್ತೆಗುಂಡಿ ಸಮಸ್ಯೆ ಬಗೆಹರಿಸಲು ಸರ್ಕಾರ ಬದ್ಧ: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೨. ರಾಜ್ಯದ ೧೪ ದೇವಾಲಯಗಳಲ್ಲಿ ಸೇವಾ ಶುಲ್ಕ ಹೆಚ್ಚಿಸಿದ ಮುಜರಾಯಿ ಇಲಾಖೆ - ಸಕಾರದ ವಿರುದ್ಧ ಬಿಜೆಪಿ ಅಸಮಾಧಾನ

೩. ಕೇಂದ್ರ ರೇಷ್ಮೆ ಮಂಡಳಿಯ ೭೬ನೇ ಸಂಸ್ಥಾಪನಾ ದಿನ - ಬೆಂಗಳೂರಿನಲ್ಲಿ ೪ ಒಡಂಬಡಿಕೆಗಳಿಗೆ ಸಹಿ

೪. ಅಂಗಾಂಗ ದಾನದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವಂತೆ ಸಚಿವ ಚೆಲುವರಾಯ ಸ್ವಾಮಿ ಕರೆ

೫. ದಾವಣಗೆರೆಯಲ್ಲಿ ಮಹಾಗಣಪತಿ ಶೋಭಾಯಾತ್ರೆ; ಬಿಗಿ ಬಂದೋಬಸ್ತ್

><><><><><><

ಬೆಂಗಳೂರಿನ "ರಸ್ತೆಗುಂಡಿ ಸಮಸ್ಯೆ ಬಗೆಹರಿಸಲು ಸರ್ಕಾರ ಬದ್ಧವಾಗಿದ್ದು, ಸಮಾರೋಪಾದಿಯಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಯಾರೂ ಉದ್ದೇಶಪೂರ್ವಕವಾಗಿ

ರಸ್ತೆಗುಂಡಿಗಳನ್ನು ಮಾಡುವುದಿಲ್ಲ. ಅತಿಯಾದ ಮಳೆ ಬಿದ್ದ ಕಾರಣಕ್ಕೆ ಗುಂಡಿಗಳಾಗಿವೆ. ೭ ಸಾವಿರಕ್ಕೂ ಹೆಚ್ಚು ರಸ್ತೆಗುಂಡಿಗಳನ್ನು ಈಗಾಗಲೇ ಮುಚ್ಚಲಾಗಿದೆ. ಇನ್ನೂ ೫ ಸಾವಿರದಷ್ಟು ಗುಂಡಿಗಳನ್ನು ಮುಚ್ಚಲು ಬಾಕಿಯಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬಿಜೆಪಿ ಶಾಸಕರ ಕ್ಷೇತ್ರಕ್ಕೆ ೨೫ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಅನುದಾನ ನೀಡಿದರೂ ರಸ್ತೆಗುಂಡಿಗಳನ್ನು ಯಾಕೆ ಮುಚ್ಚಿಸಿಲ್ಲ ಎಂದು ಪ್ರಶ್ನಿಸಿದ್ದಾರೆ.

><><><><><

ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಬರುವ ರಾಜ್ಯದ ೧೪ ಪ್ರಮುಖ ದೇವಾಲಯಗಳಲ್ಲಿ ಸೇವಾ ಶುಲ್ಕ ಹೆಚ್ಚಿಸಲಾಗಿದೆ. ಪ್ರಸಿದ್ಧ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನ, ಮೇಲುಕೋಟೆ ಚೆಲುವನಾರಾಯಣ ಸ್ವಾಮಿ ದೇವಸ್ಥಾನ, ಸೌತಡ್ಕ ಮಹಾಗಣಪತಿ ದೇವಸ್ಥಾನ, ಮಂದಾರ್ತಿ ದುರ್ಗಾ ಪರಮೇಶ್ವರಿ ದೇವಸ್ಥಾನ ಮತ್ತು ಇತರ ೧೪ ದೇವಾಲಯಗಳಲ್ಲಿ ಸೇವಾ ಶುಲ್ಕವನ್ನು ಹೆಚ್ಚಿಸಿ ಮುಜರಾಯಿ ಇಲಾಖೆ ಆದೇಶ ಹೊರಡಿಸಿದೆ. ಪರಿಷ್ಕೃತ ಶುಲ್ಕಗಳು ಅಕ್ಟೋಬರ್ ೧ ರಿಂದ ಜಾರಿಗೆ ಬರಲಿವೆ. ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಸೇವಾ ಶುಲ್ಕವನ್ನು ಹೆಚ್ಚಿಸುವ ನಿರ್ಧಾರವನ್ನು ಆಯಾ ದೇವಾಲಯ ಆಡಳಿತ ಮಂಡಳಿಗಳು ತೆಗೆದುಕೊಂಡಿದ್ದು, ಅವರ ಶಿಫಾರಸುಗಳ ಆಧಾರದ ಮೇಲೆ ಆದೇಶ ಹೊರಡಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಭಕ್ತರ ಸೇವಾ ಶುಲ್ಕವನ್ನು ಹೆಚ್ಚಿಸಿದ್ದಕ್ಕಾಗಿ ಸರ್ಕಾರದ ವಿರುದ್ಧ ಪ್ರತಿ ಪಕ್ಷ ನಾಯಕ ಆರ್. ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. "ದುಬಾರಿ ಪಾಸ್‌ಗಳ ಮೂಲಕ, ಸಾಮಾನ್ಯ ಜನರಿಗೆ ದಸರಾ ಆಚರಣೆಯನ್ನು ವೀಕ್ಷಿಸಲು ಕಷ್ಟವಾಗುವಂತೆ ಮಾಡಲಾಗಿದೆ ಎಂದು ದೂರಿದ್ದಾರೆ.

><><><><><

ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರ - ಜಿಕೆವಿಕೆಯಲ್ಲಿ ನಡೆದ ಕೇಂದ್ರೀಯ ರೇಷ್ಮೆ ಮಂಡಳಿಯ ೭೬ನೇ ಸಂಸ್ಥಾಪನಾ ದಿನದ ಸಂಭ್ರಮಾಚರಣೆಯನ್ನು ಕೇಂದ್ರ ರೇಷ್ಮೆ ಮಂಡಳಿ ಸದಸ್ಯ ಹಾಗೂ ಸಂಸದ ಲಕ್ಷ್ಮೀ ನಾರಾಯಣ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸದ ಡಾ.ಸುಧಾಕರ್, ಮನ್ರೇಗಾ ಯೋಜನೆ ಅಡಿಯಲ್ಲಿ ರೇಷ್ಮೆ ಬೆಳೆಗಾರರನ್ನು ಸೇರಿಸುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಧ್ವನಿ:ಸಂಸದ ಡಾ.ಸುಧಾಕರ್

ಜವಳಿ ಸಚಿವಾಲಯದ ಜಂಟಿ ಕಾರ್ಯದರ್ಶಿ ಪದ್ಮಿನಿ ಶಿಮ್ಲಾ ಮಾತನಾಡಿದ ೬೪ ಸಾವಿರ ಡೀಲರ್ ಗಳು ಮತ್ತು ಗ್ರಾಹಕರಲ್ಲಿ ರೇಷ್ಮೆ ಮಂಡಳಿ ತಂತ್ರಜ್ಞಾನದ ಕುರಿತು ಅರಿವು ಮೂಡಿಸಲಾಗಿದೆ. ಪ್ರಸ್ತುತ ಜಾಗತಿಕ ರೇಷ್ಮೆ ಉತ್ಪಾದನೆಯಲ್ಲಿ ಭಾರತ ೪೨ ಪ್ರತಿಶತ ಹೊಂದಿದೆ ಎದು ಹೇಳಿದರು. ಮಂಡಳಿಯ ಸದಸ್ಯ ಕಾರ್ಯದರ್ಶಿ ಪಿ ಶಿವಕುಮಾರ್ ಮಾತನಾಡಿ ೧೨೯ ಜಿಲ್ಲೆಗಳಲ್ಲಿ ಈ ಕಾರ್ಯಕ್ರಮ ನೆರವೇರಿದೆ. ಮೈಸೂರಿನಲ್ಲಿ ರಾಷ್ಟ್ರೀಯ ರೇಷ್ಮೆ ಸಂಗ್ರಹಾಲಯವನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಕೇಂದ್ರೀಯ ರೇಷ್ಮೆ ಮಂಡಳಿ ನಾಲ್ಕು ಸಂಸ್ಥೆಗಳೊಂದಿಗೆ ತಿಳುವಳಿಕಾ ಒಪ್ಪಂದ ಮಾಡಿಕೊಂಡಿದೆ.

><><><><><><

ಅಂಗಾಂಗ ದಾನದ ಬಗ್ಗೆ ಪ್ರತಿಯೊಬ್ಬರಲ್ಲೂ ಜಾಗೃತಿ ಮೂಡಿಸುವುದು ಅನಿವಾರ್ಯವಾಗಿದೆ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ನಾಗಮಂಗಲದಲ್ಲಿ ಆದಿಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲಯ ಆಯೋಜನೆ ಮಾಡಿದ್ದ ಅಂಗಾಂಗ ದಾನ ಜಾಗೃತಿ ಜಾಥಾ ವಾಕ್ ಫಾರ್ ಲೈಫ್ ಅಭಿಯಾನದಲ್ಲಿ ಭಾಗವಹಿಸಿ

ಮಾತನಾಡಿದ ಅವರು, ಒಬ್ಬ ಮನುಷ್ಯನ ಮೆದುಳು ನಿಷ್ಕ್ರಿಯಗೊಂಡಾಗ ಅವನ ದೇಹದಿಂದ ಎಂಟು ಜೀವ ಉಳಿಸುವಂತ ಒಂದು ಅವಕಾಶವಿದೆ ಎಂದು ಹೇಳಿದ್ದಾರೆ. ರಾಜ್ಯದ ಏಳು ಕೋಟಿ ಜನರು ಇಂತಹ ಒಂದು ಕಾರ್ಯಕ್ರಮದಲ್ಲಿ ತಮ್ಮನ ತಾವು ಜೋಡಿಸಿಕೊಳ್ಳುವಂತ ಪ್ರಯತ್ನಗಳನ್ನ ಮಾಡುವ ಕೆಲಸಕ್ಕೆ ಸಿದ್ಧರಾಗಬೇಕೆಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಠಾಧೀಶ ನಿರ್ಮಲಾನಂದ ಸ್ವಾಮೀಜಿ, ಶ್ರವಣಬೆಳಗೊಳದ ಶ್ರೀ ಕೀರ್ತಿಭಟ್ಟಾರಕ ಸ್ವಾಮೀಜಿ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು.

><><><><><

ದಾವಣಗೆರೆಯಲ್ಲಿ ಸಾರ್ವಜನಿಕ ಹಿಂದೂ ಮಹಾಗಣಪತಿ ಸೇವಾ ಸಮಿತಿ ಪ್ರತಿಷ್ಠಾಪಿಸಿದ್ದ ಗಣೇಶ ಮೂರ್ತಿಯ ಶೋಭಾಯಾತ್ರೆ ಆರಂಭಗೊಂಡಿದ್ದು, ಮೆರವಣಿಗೆಯಲ್ಲಿ ೧ ಲಕ್ಷಕ್ಕೂ ಅಧಿಕ ಜನರು ಭಾಗವಹಿಸಿದ್ದಾರೆ. ಬಂದೋಬಸ್ತ್‌ಗಾಗಿ ಕೆಎಸ್‌ಆರ್‌ಪಿ ತುಕಡಿ ಸೇರಿದಂತೆ ೨ ಸಾವಿರಕ್ಕೂ ಅಧಿಕ ಪೊಲೀಸರನ್ನು ನಿಯೋಜಿಸಲಾಗಿದೆ, ಡಿಜೆ ಬಳಕೆಗೆ ಜಿಲ್ಲಾಡಳಿತ ನಿಷೇಧ ಹೇರಿರುವುದರಿಂದ ೨೫ ಕ್ಕೂ ಅಧಿಕ ಕಲಾ ತಂಡಗಳು ಭಾಗವಹಿಸಿವೆ. ಮೆರವಣಿಗೆ ಸಾಗುವ ಮಾರ್ಗದ ಉದ್ದಕ್ಕೂ ಸಾವಿರಕ್ಕೂ ಅಧಿಕ ಸಿಸಿ ಟಿವಿ ಕ್ಯಾಮರ ಅಳವಡಿಸಲಾಗಿದ್ದು, ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚುವರಿ ಪೊಲೀಸ್ ಪಡೆ ನಿಯೋಜಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ.

><><><><><

ಪ್ರಧಾನಿ ನರೇಂದ್ರ ಮೋದಿ ಅವರ ಬಾಲ್ಯದ ದಿನಗಳ ಚರಿತ್ರೆ ಆಧಾರಿತ 'ಚಲೋ ಜೀತೆ ಹೈ' ಕಿರು ಚಿತ್ರವನ್ನು ಧಾರವಾಡ ಐನಾಕ್ಸ್ ಸ್ಮಾರ್ಟ್ ಸಿಟಿ ಮಾಲ್ ನಲ್ಲಿ ಪ್ರದರ್ಶಿಸಲಾಯಿತು. ಕಿರುಚಿತ್ರ

ಪ್ರದರ್ಶನದ ಎರಡನೇ ದಿನವೇ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಮಾತನಾಡಿದ ಪ್ರೇಕ್ಷಕರಾದ ರೇಣುಕಾ ಲಿಂಬೆನ್ನದೇವರಮಠ ಹೆಚ್ಚಿನ ಸಂಖ್ಯೆಯಲ್ಲಿ ಮಕಳು ಸಿನಿಮಾ ವೀಕ್ಷಿಸುವಂತೆ ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ :ರೇಣುಕಾ ಲಿಂಬೆನ್ನದೇವರಮಠ

'ಚಲೋ ಜೀತೆ ಹಮ್' ಚಲನಚಿತ್ರ ಉತ್ತರಕನ್ನಡ ಜಿಲ್ಲೆಯ ಕಾರವಾರದ ಮೀರಜ್-ಗೀತಾಂಜಲಿ ಚಲನ ಚಿತ್ರಮಂದಿರದಲ್ಲಿ ಪ್ರದರ್ಶನಗೊಳ್ಳುತ್ತಿದೆ .ಈ ಚಲನಚಿತ್ರವು ಇದೇ ೨೪ ರವರೆಗೆ ಪ್ರತಿದಿನ ಸಂಜೆ ೭ ಗಂಟೆಗ ಪ್ರದರ್ಶನಗೊಳ್ಳಲಿದೆ

><><><><><

ಹಾವೇರಿ ಜಿಲ್ಲೆಯಲ್ಲಿ ನಿರಂತರ ಮಳೆಯಿಂದಾಗಿ ೧೬ ಸಾವಿರ ೬೮೨ ಹೆಕ್ಟೇರ್ ಕೃಷಿ ಪ್ರದೇಶ ಹಾಗೂ ೩೪೦ ಹೆಕ್ಟೇರ್ ತೋಟಗಾರಿಕಾ ಬೆಳೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ನಿರಂತರ ಮಳೆಯಿಂದ ಉಂಟಾದ ಬೆಳೆಹಾನಿಗೆ ಸಂಬಂಧಿಸಿದಂತೆ ಜಂಟಿ ಸಮೀಕ್ಷೆ ನಡೆಸಲಾಗಿದೆ. ತಾಲ್ಲೂಕುವಾರು ಬೆಳೆಹಾನಿ ಕ್ಷೇತ್ರದ ಬಗ್ಗೆ ತಹಶೀಲ್ದಾರ್‌ಗಳು ವರದಿ ಸಲ್ಲಿಸಿದ್ದಾರೆ. ಜಂಟಿ ಸಮೀಕ್ಷೆ ಹಾಗೂ ಪಟ್ಟಿಯ ಕುರಿತು ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ, ಲಿಖಿತವಾಗಿ ಸಂಬಂಧಿಸಿದ ತಾಲ್ಲೂಕಿನ ತಹಶೀಲ್ದಾರ, ಕೃಷಿ, ತೋಟಗಾರಿಕಾ ಕಚೇರಿಗಳಲ್ಲಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿದೆ. ಆಕ್ಷೇಪಣೆ ಸಲ್ಲಿಸಲು ಸೆಪ್ಟೆಂಬರ್ ೨೪ ಕೊನೆ ದಿನವಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ.

><><><><><

ಕೋಲಾರ ನಗರ ಹೊರವಲಯದ ಟಮಕ ಕೈಗಾರಿಕಾ ಪ್ರದೇಶದ ಬಾಲಾಜಿ ರೈಸ್ ಮಿಲ್ ಮುಂಭಾಗ ಕಾರಿನಲ್ಲಿ ಮಾದಕ ದ್ರವ್ಯ ಸಾಗಿಸುತ್ತಿದ್ದ ಹೊರರಾಜ್ಯದ ಎಂಟು ಮಂದಿಯನ್ನು ವಿಶೇಷ ಪೊಲೀಸ್ ತಂಡ ಬಂಧಿಸಿದೆ. ಆರೋಪಿಗಳಿಂದ ೨೦ ಲಕ್ಷ ರೂಪಾಯಿ ಬೆಲೆಯ ೨೦ ಕೆ.ಜಿ ೫೮೦ ಗ್ರಾಂ ಮಾದಕ ದ್ರವ್ಯ ಹಾಗೂ ೧೦ ಲಕ್ಷ ರೂಪಾಯಿ ಮೌಲ್ಯದ ಕಾರನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಅಕ್ರಮ ಮಾದಕದ್ರವ್ಯ ಸಾಗಾಟ ಹಾಗೂ ಮಾರಾಟ ತಡೆಯುವ ಸಲುವಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್, ಜಗದೀಶ್ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಎಂ.ಎಚ್. ನಾಗ್ತೆ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿತ್ತು.

><><><><><

ಮೀನುಗಾರಿಕೆ ಇಲಾಖೆಯ ವತಿಯಿಂದ ನೋಂದಣಿಯಾಗಿರುವ ಮೋಟಾರಿಕೃತ ದೋಣಿಗಳಲ್ಲಿ ೧೫ ವರ್ಷ ಕಾಲಾವಧಿ ಮೀರಿರುವ ಹಳೆಯ ಇಂಜಿನ್ ಗಳನ್ನು ಬದಲಾಯಿಸಿ ಹೊಸ ಇಂಜಿನ್ ಖರೀದಿಸಲು ಮತ್ತು ಹೊಸ ದೋಣಿ ನಿರ್ಮಿಸಿ ಇಂಜಿನ್ ಖರೀದಿಸಲು ಸಹಾಯಧನ ನೀಡುವ ಯೋಜನೆಯಡಿ ಕಾರವಾರದಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಶೇಕಡ ೫೦ ರಂತೆ ಗರಿಷ್ಠ ಒಂದು ಲಕ್ಷ ರೂಪಾಯಿ ಮಿತಿಗೊಳಪಟ್ಟು ಸಹಾಯಧನ ನೀಡಲಾಗುವುದು. ಆಸಕ್ತ ಮೀನುಗಾರರು ಸಂಬಂಧಿತ ತಾಲೂಕು ಮೀನುಗಾರಿಕಾ ಸಹಾಯಕ ನಿರ್ದೇಶಕರ ಕಚೇರಿಯಿಂದ ಅರ್ಜಿಯನ್ನು ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಅ.೩೦ ರೊಳಗಾಗಿ ಅರ್ಜಿ ಸಲ್ಲಿಸಬೇಕು ಎಂದು ಉತ್ತರಕನ್ನಡ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

><><><END><><><